# ಕರ್ನಾಟಕ ಸರ್ಕಾರ

ಸಂ. ಗ್ರಾಅಪ 837 ಗ್ರಾಪಂಅ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 25.10.2019

## ಸುತ್ತೋಲೆ

**ವಿಷಯ:** 2019ರ ನವೆಂಬರ್ ಮಾಹೆಯಲ್ಲಿ ಮಕ್ಕಳ ವಿಶೇಷ ಗ್ರಾಮ ಸಭೆಗಳನ್ನು ನಡೆಸುವ ಬಗ್ಗೆ.

**ಉಲ್ಲೇಖ:**
1. ಸರ್ಕಾರದ ಸುತ್ತೋಲೆ ಸಂ. ಗ್ರಾಅಪ 367 ಗ್ರಾಪಂಅ 2006, ದಿನಾಂಕ 18.09.2006.
2. ಸರ್ಕಾರದ ಸುತ್ತೋಲೆ ಸಂ. ಗ್ರಾಅಪ 108 ಗ್ರಾಪಂಅ 2007, ದಿನಾಂಕ 30.10.2007.
3. ಸರ್ಕಾರದ ಸುತ್ತೋಲೆ ಸಂ. ಗ್ರಾಅಪ 487 ಗ್ರಾಪಂಅ 2017, ದಿನಾಂಕ 29.08.2017, 17.10.2018.

---

ಉಲ್ಲೇಖಿತ ಸುತ್ತೋಲೆಗಳಲ್ಲಿ ಪ್ರತಿ ವರ್ಷ ನವೆಂಬರ್ ತಿಂಗಳಿನಲ್ಲಿ ಮಕ್ಕಳ ವಿಶೇಷ ಗ್ರಾಮ ಸಭೆಗಳನ್ನು ನಡೆಸುವ ಬಗ್ಗೆ ಅವುಗಳ ರೂಪುರೇಷೆ ಮತ್ತು ಗ್ರಾಮಸಭೆಗಳಲ್ಲಿ ಚರ್ಚಿಸಲ್ಪಡಬೇಕಾದ ವಿಷಯಗಳ ಬಗ್ಗೆ ವಿಸ್ತೃತವಾಗಿ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ಮಾರ್ಗದರ್ಶನ ನೀಡಲಾಗಿದೆ.

ಮಕ್ಕಳ ರಕ್ಷಣೆ, ಸರ್ವಾಂಗೀಣಾಭಿವೃದ್ಧಿಗಾಗಿ ರಾಜ್ಯ ಹಾಗೂ ಕೇಂದ್ರ ಸರ್ಕಾರಗಳು ಹಲವು ಹತ್ತು ಯೋಜನೆಗಳನ್ನು ರೂಪಿಸಿವೆ. ಮಕ್ಕಳ ಹಕ್ಕುಗಳನ್ನು ರಕ್ಷಿಸುವುದು ಎಲ್ಲರ ಕರ್ತವ್ಯಾವಾಗಿರುತ್ತದೆ. ಗ್ರಾಮಾಂತರ ಪ್ರದೇಶಗಳಲ್ಲಿ ಮಕ್ಕಳ ಹಕ್ಕುಗಳನ್ನು ರಕ್ಷಿಸಿ ಜಾರಿಗೊಳಿಸಲು ಅವರುಗಳ ಆಶೋತ್ತರಗಳು ಹಾಗೂ ಭಾವನೆಗಳನ್ನು ಮುಕ್ತವಾಗಿ ವ್ಯಕ್ತಪಡಿಸಲು ಸೂಕ್ತ ಅವಕಾಶಗಳನ್ನು ಕಲ್ಪಿಸಲು ಮಕ್ಕಳಿಗಾಗಿ ವಿಶೇಷ ಗ್ರಾಮ ಸಭೆಗಳನ್ನು ಗ್ರಾಮ ಪಂಚಾಯತಿಗಳ ವತಿಯಿಂದ ಪ್ರತಿ ವರ್ಷ ನಡೆಸಲಾಗುತ್ತಿದೆ. ಈ ಬಗ್ಗೆ ಉಲ್ಲೇಖದ ಸರ್ಕಾರದ ಸುತ್ತೋಲೆಗಳಲ್ಲಿ ವಿವರವಾಗಿ ತಿಳಿಸಲಾಗಿದೆ. ಗ್ರಾಮ ಪಂಚಾಯತಿಗಳು ನಡೆಸುವ ಗ್ರಾಮಸಭೆಗಳಲ್ಲಿ ಮಕ್ಕಳ ಸ್ಥಿತಿಗತಿ, ಅವರುಗಳ ಅಭಿವೃದ್ಧಿ ಹಾಗೂ ಅವರುಗಳಿಗೆ ಸಂವಿಧಾನಾತ್ಮಕವಾಗಿ ಒದಗಿಸಿರುವ ಹಕ್ಕುಗಳ ಬಗ್ಗೆ ವಿಶೇಷವಾಗಿ ಚರ್ಚಿಸಿ, ಅವರುಗಳ ಬೇಡಿಕೆಗಳ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವುದು ಗ್ರಾಮ ಪಂಚಾಯತಿಗಳು ಹಾಗೂ ಪೋಷಕರು, ಶಾಲಾ ಮುಖ್ಯಸ್ಥರುಗಳ ಜವಾಬ್ದಾರಿಯಾಗಿರುತ್ತದೆ.

ಈ ಹಿನ್ನೆಲೆಯಲ್ಲಿ 2019ರ ನವೆಂಬರ್ ಮಾಹೆಯಲ್ಲಿ ಎಲ್ಲಾ ಗ್ರಾಮ ಪಂಚಾಯತಿಗಳ ವತಿಯಿಂದ ಕಡ್ಡಾಯವಾಗಿ ಮಕ್ಕಳ ವಿಶೇಷ ಗ್ರಾಮ ಸಭೆಗಳನ್ನು ನಡೆಸಲು ತಿಳಿಸಲಾಗಿದೆ. ಮಕ್ಕಳ ವಿಶೇಷ ಗ್ರಾಮ ಸಭೆಗಳನ್ನು ನಡೆಸುವಾಗ ಈ ಕೆಳಕಂಡ ಅಂಶಗಳನ್ನು ಕಡ್ಡಾಯವಾಗಿ ಪಾಲಿಸಲು ತಿಳಿಸಲಾಗಿದೆ.

- ಮಕ್ಕಳ ವಿಶೇಷ ಗ್ರಾಮ ಸಭೆಗಳನ್ನು ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಹೆಚ್ಚು ದೊಡ್ಡದಾದ ಆವರಣವಿರುವ ಪ್ರೌಢ ಶಾಲೆಗಳಲ್ಲಿ ನಡೆಸುವುದು.
- ಗ್ರಾಮ ಸಭೆಗಳಲ್ಲಿ ಮಕ್ಕಳು ಕುಳಿತುಕೊಳ್ಳಲು ಆಸನ ವ್ಯವಸ್ಥೆ ಮಾಡುವುದು, ಮಾತನಾಡಲು ಧ್ವನಿವರ್ಧಕ ವ್ಯವಸ್ಥೆ ಮಾಡುವುದು. ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವುದು.
- ಮುಕ್ತವಾಗಿ ಭಾಗವಹಿಸಲು ಸೂಕ್ತ ವಾತಾವರಣ ಕಲ್ಪಿಸುವುದು.
- ಮಕ್ಕಳು ವ್ಯಕ್ತಪಡಿಸುವ ಅಭಿಪ್ರಾಯಗಳನ್ನು ಭಾಗವಹಿಸುವ ಎಲ್ಲಾ ಅಧಿಕಾರಿಗಳು ಹಾಗೂ ಶಾಲಾ ಮುಖ್ಯಸ್ಥರು, ಪೋಷಕರು ಗಮನವಿಟ್ಟು ಕೇಳಿಸಿಕೊಳ್ಳುವುದು.
- ಮಕ್ಕಳಿಗಾಗಿ ಕರೆಯಲಾದ ವಿಶೇಷ ಗ್ರಾಮ ಸಭೆಗಳಲ್ಲಿ ಬೇರೆ ಯಾವುದೇ ವಿಷಯಗಳನ್ನು ಚರ್ಚಿಸಲು ಅವಕಾಶ ನೀಡಬಾರದು.
- ಮಕ್ಕಳ ವಿಶೇಷ ಗ್ರಾಮ ಸಭೆಗಳಲ್ಲಿ ಗ್ರಾಮ ಪಂಚಾಯತಿ ಅಧಿಕರಿಗಳು, ಅಂಗನವಾಡಿ ಕಾರ್ಯಕರ್ತರು, ಶಾಲಾ ಮುಖ್ಯೋಪಾಧ್ಯಾಯರು, ಎಸ್.ಡಿ.ಎಂ.ಸಿ. ಅಧ್ಯಕ್ಷರು, ಆರೋಗ್ಯ ಇಲಾಖೆ ಕಾರ್ಯಕರ್ತರು, ಯುವಕ ಯುವತಿ ಮಂಡಲದ ಮುಖ್ಯಸ್ಥರು, ಪೋಲೀಸ್ ಅದಿಕಾರಿಗಳು ಭಾಗವಹಿಸುವಂತೆ ನೋಡಿಕೊಳ್ಳುವುದು.
- ಮಕ್ಕಳ ವಿಶೇಷ ಗ್ರಾಮ ಸಭೆಗಳಲ್ಲಿ ಮಕ್ಕಳ ಹಕ್ಕುಗಳ ಬಗ್ಗೆ ಅಧಿಕಾರಿಗಳು ಮಾಹಿತಿ ನೀಡುವುದು.
- ಉಚಿತ ಶಿಕ್ಷಣ, ಉಚಿತ ಆರೋಗ್ಯ, ಮಧ್ಯಾಹ್ನದ ಬಿಸಿಯೂಟ, ಉಚಿತ ಪುಸ್ತಕ, ಸಮವಸ್ತ್ರ, ಕ್ರೀಡಾ ಚಟುವಟಿಕೆಗಳು, ಗ್ರಂಥಾಲಯ ಸೌಕರ್ಯ, ಇತ್ಯಾದಿ ಸೌಕರ್ಯಗಳ ಬಗ್ಗೆ ಮಾಹಿತಿ ನೀಡುವುದು.
- ಬಾಲ್ಯ ವಿವಾಹ ನಿಷೇಧ ಕಾಯ್ದೆ, ಮಕ್ಕಳ ಸಾಕಾಣಿಕೆ ನಿಷೇಧದ ಕಾಯ್ದೆ, ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ನಿಷೇಧ ಕಾಯ್ದೆ, ಬಾಲಕಾರ್ಮಿಕ ಪದ್ಧತಿ ನಿಷೇಧ, ಜೀತ ಪದ್ಧತಿ ನಿಷೇಧ ಕಾಯ್ದೆಗಳ ಬಗ್ಗೆ ಅರಿವು ಮೂಡಿಸುವುದು.
- ವಿಶೇಷವಾಗಿ ಶಾಲೆಯಿಂದ ಹೊರಗುಳಿದ ಮಕ್ಕಳು (ಅನುಸೂಚಿತ ಜಾತಿ, ಅನುಸೂಚಿತ ಪಂಗಡ, ಹಿಂದುಳಿದ ವರ್ಗಗಳು, ಅಲ್ಪಸಂಖ್ಯಾತರು), ವಿಕಲಚೇತನರು ಹಾಗೂ ಹೆಣ್ಣು ಮಕ್ಕಳು ಈ ಗ್ರಾಮ ಸಭೆಯಲ್ಲಿ ಭಾಗವಹಿಸಿ ಚರ್ಚಿಸಲು ಅವಕಾಶ ಕಲ್ಪಿಸುವುದು.
- ಮಕ್ಕಳು ವ್ಯಕ್ತಪಡಿಸುವ ಎಲ್ಲಾ ಅಭಿಪ್ರಾಯಗಳನ್ನು ದಾಖಲಿಸಿಕೊಳ್ಳಲು ಹಾಗೂ ಅವುಗಳ ಮೇಲೆ ಅನುಪಾಲನ ಕ್ರಮ ಕೈಗೊಳ್ಳಲು ವ್ಯವಸ್ಥೆ ಮಾಡುವುದು.

- ಮಕ್ಕಳ ವಿಶೇಷ ಗ್ರಾಮ ಸಭೆಗಳ ನಡವಳಿಗಳನ್ನು ಗ್ರಾಮ ಪಂಚಾಯತಿಯು ಸಂಬಂಧಿಸಿದ ಎಲ್ಲಾ ಅಧಿಕಾರಿಗಳಿಗೆ ಅನುಪಾಲನ ಕ್ರಮಕ್ಕಾಗಿ ಕಳುಹಿಸಿಕೊಡುವುದು.
- ಮಕ್ಕಳ ವಿಶೇಷ ಗ್ರಾಮ ಸಭೆಗಳ ನಡವಳಿಗಳನ್ನು ಪಂಚತಂತ್ರದಲ್ಲಿ ಅಪ್‌ಲೋಡ್ ಮಾಡುವುದು.

ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಮ್ಮ ಜಿಲ್ಲೆಗಳ ವ್ಯಾಪ್ತಿಯಲ್ಲಿನ ಕಾರ್ಯನಿರ್ವಹಣಾಧಿಕಾರಿಗಳಿಗೆ, ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಮತ್ತು ಕಾರ್ಯದರ್ಶಿಗಳಿಗೆ ಕಡ್ಡಾಯವಾಗಿ ಮಕ್ಕಳ ಹಕ್ಕುಗಳ ಗ್ರಾಮ ಸಭೆಗಳನ್ನು ಏರ್ಪಡಿಸುವಂತೆ ಸೂಕ್ತ ನಿರ್ದೇಶನ ನೀಡಲು ಮತ್ತು ಗ್ರಾಮ ಸಭೆಗಳನ್ನು ಆಯೋಜಿಸಿದ ಬಗ್ಗೆ ಸರ್ಕಾರಕ್ಕೆ ವರದಿಯನ್ನು ಸಲ್ಲಿಸುವಂತೆ ಸೂಚಿಸಲಾಗಿದೆ.

(ಎಸ್.ಎ.ಅಶ್ಫಾಕ್ ಹಸನ್)
ನಿರ್ದೇಶಕರು (ಪಂಚಾಯತ್ ರಾಜ್-1) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
3. ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.
4. ಮುಖ್ಯ ಸಂಪಾದಕರು, ಕರ್ನಾಟಕ ವಿಕಾಸ/ವೆಬ್‌ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
5. ಶಾರಕ/ಹೆಪ್ರ.

ಪ್ರತಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ಇವರ ಮಾಹಿತಿಗಾಗಿ
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿ, ಗ್ರಾ.ಅ&ಪಂ.ರಾಜ್ ಇಲಾಖೆ, ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ರವರ ಆಪ್ತ ಕಾರ್ಯದರ್ಶಿ.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ರವರ ಆಪ್ತ ಕಾರ್ಯದರ್ಶಿ.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ ರವರ ಆಪ್ತ ಕಾರ್ಯದರ್ಶಿ.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಇಲಾಖೆ ರವರ ಆಪ್ತ ಕಾರ್ಯದರ್ಶಿ.
8. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ರವರ ಆಪ್ತ ಕಾರ್ಯದರ್ಶಿ.
9. ಸರ್ಕಾರದ ಕಾರ್ಯದರ್ಶಿ, ಅಲಸಂಖ್ಯಾತರ ಕಲ್ಯಾಣ ಇಲಾಖೆ ರವರ ಆಪ್ತ ಕಾರ್ಯದರ್ಶಿ.
10. ನಿರ್ದೇಶಕರು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
11. ನಿರ್ದೇಶಕರು, ವಿಕಲಚೇತನರು ಮತ್ತು ಹಿರಿಯ ನಾಗರಿಕರ ಕಲ್ಯಾಣ ಇಲಾಖೆ, ಬೆಂಗಳೂರು.